# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ವೈ.ಎ.ನಾರಾಯಣಸ್ವಾಮಿ ಇವರ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಉತ್ತರ.

**ಪ್ರಶ್ನೆ:**

ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಭೋವಿ ಅಭಿವೃದ್ಧಿ ನಿಗಮ ಹಾಗೂ ಆದಿ ಜಾಂಭವ ಅಭಿವೃದ್ಧಿ ನಿಗಮ, ವಾಲ್ಮೀಕಿ ಅಭಿವೃದ್ಧಿ ನಿಗಮಗಳಲ್ಲಿ 2015-16 ರಿಂದ 2019-20ರವರೆಗೆ ಗಂಗಾ ಕಲ್ಯಾಣ ಯೋಜನೆಯ ಕಾಮಗಾರಿಗಳಲ್ಲಿ ಟೆಂಡರ್ ರಹಿತ ಅನುಷ್ಠಾನ ಅವ್ಯವಹಾರ, ಅಕ್ರಮ ಭ್ರಷ್ಟಾಚಾರ ಜರುಗಿದ್ದು, ಇದರಲ್ಲಿ ಸುಮಾರು 250 ಕೋಟಿಗಳಗೂ ಅಧಿಕ ವ್ಯಾಪಕ ಭ್ರಷ್ಟಾಚಾರ ಎಸಗಿ ಸರ್ಕಾರದ ಹಣವನ್ನು ದುರುಪಯೋಗ ಪರಿಸಿಕೊಂಡಿರುವ ಬಗ್ಗೆ ಸದನದಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಯೋಜನೆ ಸರ್ಕಾರದ ಪ್ರತಿಷ್ಟಿತ ಯೋಜನೆಯಾಗಿದ್ದು, ಈ ಯೋಜನೆಯಡಿ ಕನಿಷ್ಟ 1½ ಎಕರೆಯಿಂದ 05 ಎಕರೆ ಜಮೀನು ಹೊಂದಿರುವ ಹಾಗೂ ಮಲೆನಾಡು ಪ್ರದೇಶಗಳಾದ ಕೊಡಗು, ದಕ್ಷಿಣ ಕನ್ನಡ, ಉಡುಪಿ, ಕಾರವಾರ, ಚಿಕ್ಕಮಗಳೂರು, ಶಿವಮೊಗ್ಗ ಮತ್ತು ಹಾಸನ ಜಿಲ್ಲೆಗಳಲ್ಲಿ ನಿರ್ಬಂದವನ್ನು ಸಡಿಲಿಸಲಾಗಿದ್ದು, ಕನಿಷ್ಟ 01 ಎಕರೆ ಜಮೀನು ಹೊಂದಿರುವ ಪರಿಶಿಷ್ಟ ಜಾತಿಯ ಸಣ್ಣ ಮತ್ತು ಅತೀ ಸಣ್ಣ ರೈತರು ಹೊಂದಿರುವ ನೀರಾವರಿ ಸೌಲಭ್ಯದಿಂದ ವಂಚಿತರಾಗಿರುವ ಜಮೀನಿನಲ್ಲಿ ಕೊಳವೆಬಾವಿ ಘಟಕಗಳನ್ನು ನಿರ್ಮಾಣ ಮಾಡುವ ಮೂಲಕ ಜಮೀನನ್ನು ನೀರಾವರಿಗೆ ಒಳಪಡಿಸಲು ವಿವಿಧ ನಿಗಮಗಳು ಗಂಗಾ ಕಲ್ಯಾಣ ವೈಯಕ್ತಿಕ ಕೊಳವೆಬಾವಿ ಯೋಜನೆಯನ್ನು ಅನುಷ್ಠಾನಗೊಳಸಲಾಗುತ್ತಿದೆ. ಈ ಯೋಜನೆಯು ಸರ್ಕಾರದ ಪ್ರತಿಷ್ಟಿತ ಜನಹಿತ ಕಾರ್ಯಕ್ರಮಗಳಲ್ಲಿ ಒಂದಾಗಿರುತ್ತದೆ.

ಗಂಗಾ ಕಲ್ಯಾಣ ಯೋಜನೆಯ ಅನುಷ್ಠಾನಕ್ಕಾಗಿ ಪ್ರತಿ ವರ್ಷ ಸರ್ಕಾರವು ನಿಗಮಗಳಿಗೆ ಹಂಚಿಕೆ ಮಾಡುವ ಅನುದಾನಕ್ಕೆ ಅನುಗುಣವಾಗಿ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆಯನ್ನು ಆಧರಿಸಿ ಭೌತಿಕ ಮತ್ತು ಆರ್ಥಿಕ ಗುರಿಗಳನ್ನು ವಿಧಾನಸಭಾ ಕ್ಷೇತ್ರವಾರು ಹಂಚಿಕೆ ಮಾಡಿಕೊಂಡು ಯೋಜನೆಯನ್ನು ಅನುಷ್ಠಾನಗೊಳಸಲಾಗುತ್ತಿದೆ. ಇದೆ ರೀತಿ ಸರ್ಕಾರದಿಂದ 2015-16ರಿಂದ 2019-20ನೇ ಸಾಲಿನವರೆಗೆ ಆಯವ್ಯಯದಲ್ಲಿ ಒದಗಿಸಲಾದ ಅನುದಾನವನ್ನು ವಿಧಾನಸಭಾ ಕ್ಷೇತ್ರದಲ್ಲಿರುವ ಪರಿಶಿಷ್ಟ ಜಾತಿ ಜನರ ಜನಸಂಖ್ಯೆಗೆ ಅನುಗುಣವಾಗಿ ವಿಧಾನಸಭಾ ಕ್ಷೇತ್ರವಾರು ಕೊಳವೆಬಾವಿಗಳ ಭೌತಿಕ ಮತ್ತು ಆರ್ಥಿಕ ಗುರಿಯನ್ನು ನಿಗದಿಪಡಿಸಲಾಗಿರುತ್ತದೆ.

ಮೇಲ್ಕಂಡಂತೆ ನಿಗಧಿಪಡಿಸಲಾಗುವ ಗುರಿಗೆ ಅನುಗುಣವಾಗಿ ಕೊಳವೆಬಾವಿಗಳನ್ನು ಕೊರೆಸಲು ಮತ್ತು ಕೊರೆದ ಕೊಳವೆಬಾವಿಗಳಿಗೆ ಪಂಪ್‌ಸೆಟ್ಸ್ ಅಳವಡಿಸಲು ಆಯಾ ಸಾಲಿನಲ್ಲಿ ನಿಗಧಿಪಡಿಸಿದ ಒಟ್ಟು ವಾರ್ಷಿಕ ಗುರಿಗೆ ಇ-ಪ್ರೋಕ್ಯೂರ್‌ಮೆಂಟ್‌ನಲ್ಲಿ ಪ್ಯಾಕೇಜುವಾರು ಹಾಗೂ ವಿಧಾನಸಭಾ ಕ್ಷೇತ್ರವಾರು ಎರಡು ಕವರ್ ಬಿಡ್ (ತಾಂತ್ರಿಕ ಮತ್ತು ಆರ್ಥಿಕ) ರೀತಿಯಲ್ಲಿ ಟೆಂಡರ್ ಕರೆದು ಪ್ರಥಮ ಹಂತದಲ್ಲಿ ಟೆಂಡರ್‌ದಾರರು ಸಲ್ಲಿಸಿರುವ ತಾಂತ್ರಿಕ ಬಿಡ್ಡುಗಳನ್ನು ತಾಂತ್ರಿಕ ಪರಿಶೀಲನಾ ಸಮಿತಿಯಿಂದ ಪರಿಶೀಲನೆಗೆ ಒಳಪಡಿಸಿ, ತಾಂತ್ರಿಕವಾಗಿ ಅರ್ಹರೆಂದು ಕಂಡುಬಂದ ಗುತ್ತಿಗೆದಾರರ ಆರ್ಥಿಕ ಬಿಡ್ ತೆರೆದು ಟೆಂಡರ್ ಅಂಗೀಕಾರ ಪ್ರಾಧಿಕಾರದಿಂದ ಕಡಿಮೆ ದರ ನಮೂದಿಸಿದ ಗುತ್ತಿಗೆದಾರರನ್ನು ಪ್ಯಾಕೇಜುವಾರು ಎಲ್-1 ಗುತ್ತಿಗೆದಾರರನ್ನಾಗಿ ನಿಯಮಾನುಸಾರ ಆಯ್ಕೆ ಮಾಡಲಾಗಿದೆ. ಈ ರೀತಿ ನಿಯಮಾನುಸಾರ ಆಯ್ಕೆಗೊಂಡ ಎಲ್-1 ಗುತ್ತಿಗೆದಾರರುಗಳಿಗೆ...

..2

....ಕಾರ್ಯಾದೇಶ ನೀಡಿ ಪ್ರತಿ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ರಚಿತವಾಗಿರುವ ಆಯ್ಕೆ ಸಮಿತಿ ಮೂಲಕ ಆಯ್ಕೆಯಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳ ಜಮೀನಿನಲ್ಲಿ ನಿಯಮಾನುಸಾರ ಕೊಳವೆಬಾವಿ ಘಟಕಗಳನ್ನು ನಿರ್ಮಾಣ ಮಾಡುವ ಮೂಲಕ ಫಲಾನುಭವಿಗಳ ಜಮೀನುಗಳನ್ನು ನೀರಾವರಿಗೆ ಒಳಪಡಿಸಿ ಫಲಾನುಭವಿಗಳು ಆರ್ಥಿಕವಾಗಿ ಅಭಿವೃದ್ಧಿ ಹೊಂದಿ ಸ್ವಾವಲಂಬಿ ಮತ್ತು ಗೌರವಯುತ ಜೀವನವನನ್ನು ನಡೆಸಲು ಸಹಕಾರಿಯಾಗಿರುತ್ತದೆ.

ಗಂಗಾ ಕಲ್ಯಾಣ ಯೋಜನೆ ಅನುಷ್ಠಾನದ ಎಲ್ಲಾ ಹಂತಗಳಲ್ಲಿ ನಿಯಮಾನುಸಾರ ಟೆಂಡರ್ ಕರೆದು, ಟೆಂಡರ್ ಬಿಡ್‌ಗಳನ್ನು ನಿಯಮಾನುಸಾರ ಪರಿಶೀಲನೆ ನಡೆಸಿ ಎಲ್–1 ಗುತ್ತಿಗೆದಾರರನ್ನು ಆಯ್ಕೆ ಮಾಡಿ, ಆಯ್ಕೆಗೊಂಡ ಗುತ್ತಿಗೆದಾರರ ಮೂಲಕವೇ ಕೊಳವೆಬಾವಿ ಘಟಕಗಳನ್ನು ನಿರ್ಮಾಣ ಮಾಡಲಾಗಿರುತ್ತದೆ. ಈ ಯೋಜನೆಯ ಅನುಷ್ಠಾನದ ಎಲ್ಲಾ ಹಂತಗಳಲ್ಲೂ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲನೇ ಮಾಡಲಾಗಿರುತ್ತದೆ. ಈ ಯೋಜನೆಯ ಅನುಷ್ಠಾನದ ಯಾವುದೇ ಹಂತದಲ್ಲೂ ಭ್ರಷ್ಟಾಚಾರ ಮತ್ತು ಸರ್ಕಾರದ ಹಣ ದುರುಪಯೋಗವಾಗಲು ಅವಕಾಶ ನೀಡಿರುವುದಿಲ್ಲ.

**ಸಂಖ್ಯೆ:** ಸಕಇ 76 ಆರ್&ಐ 2020

**(ಕೋಟ ಶ್ರೀನಿವಾಸ ಪೂಜಾರಿ)**
ಮುಜರಾಯಿ, ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು.